# ಸೋಂಕಿತರಿಗೆ ಶೇ.50 ಹಾಸಿಗೆ ಮೀಸಲಿಡಿ

7/4/21

## ಖಾಸಗಿ ಆಸ್ಪತ್ರೆಗಳಿಗೆ ರಾಜ್ಯ ಸರ್ಕಾರ ಸೂಚನೆ

ಬೆಂಗಳೂರು: ರಾಜ್ಯದಲ್ಲಿ ಕೊರೊನಾ ಸೋಂಕಿತ ಚಿಕಿತ್ಸೆಗೆ ಸರ್ಕಾರಿ ಆಸ್ಪತ್ರೆಗಳಲ್ಲಿಯೇ 33 ಸಾವಿರ ಹಾಸಿಗೆ ಮೀಸಲಿಟ್ಟಿದ್ದು ಇವುಗಳ ಜತೆಗೆ ಖಾಸಗಿ ಆಸ್ಪತ್ರೆಗಳು ಶೇ.50ರಷ್ಟು ಕೊರೊನಾ ಹಾಸಿಗೆಗಳನ್ನು ಸರ್ಕಾರದಿಂದ ಶಿಫಾರಸಾಗುವ ಕೊರೊನಾ ಸೋಂಕಿತರಿಗೆ ಮೀಸಲಿಡುವಂತೆ ಸೂಚಿಸಿದೆ.

ಹಾಸಿಗೆ ಲಭ್ಯತೆ ಕುರಿತು ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ.ಸುಧಾಕರ್, ಕೊರೊನಾ ಹೆಚ್ಚಳವಾಗುತ್ತಿದ್ದು ಸೋಂಕಿತರ ಚಿಕಿತ್ಸೆಗಾಗಿ ರಾಜ್ಯದಲ್ಲಿ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ. ಸದ್ಯ 33,697 ಹಾಸಿಗೆಗಳನ್ನು ಸರ್ಕಾರಿ ಆಸ್ಪತ್ರೆಗಳಲ್ಲಿ ಮೀಸಲಿಡಲಾಗಿದೆ. ಆಕ್ಸಿಜನ್ ಸಹಿತ ಹಾಸಿಗೆಗಳ ಸಂಖ್ಯೆ 15,733 ಇದ್ದು ಈ ಪೈಕಿ 10,083 ಹಾಸಿಗೆಗಳನ್ನು ಕೊರೊನಾಗೆ ಮೀಸಲಿಡಲಾಗಿದೆ ಎಂದು ತಿಳಿಸಿದ್ದಾರೆ.



ರಾಜ್ಯದ ಖಾಸಗಿ ಆಸ್ಪತ್ರೆಗಳು ಶೇ.50 ಹಾಸಿಗೆ ಸೋಂಕಿತರಿಗೆ ಮೀಸಲಿಡಬೇಕು ಎಂದು ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಮುಖ್ಯ ಕಾರ್ಯದರ್ಶಿ ಪಿ.ರವಿಕುಮಾರ್ ಮಂಗಳವಾರ ಆದೇಶ ಹೊರಡಿಸಿದ್ದಾರೆ.

ಖಾಸಗಿ ವೈದ್ಯಕೀಯ ಸಂಸ್ಥೆಗಳು ಹಾಸಿಗೆಗಳನ್ನು ಮೀಸಲಿರಿಸುವ ಕುರಿತು 2020 ಜೂನ್ ತಿಂಗಳ ಸುತ್ತೋಲೆಯ ನಿರ್ದೇಶನ ಕಡ್ಡಾಯವಾಗಿ ಪಾಲಿಸಬೇಕು. ಇದನ್ನು ನೋಡಲ್ ಅಧಿಕಾರಿಗಳು ಖಚಿತಪಡಿಸಿಕೊಳ್ಳಬೇಕು. ಕಳೆದ ಜೂನ್ 23 ರಂದು ಹೊರಡಿಸಿದ್ದ ಆದೇಶದಲ್ಲಿ ಖಾಸಗಿ ಆಸ್ಪತ್ರೆಗಳು ತಮ್ಮ ಸಾಮರ್ಥ್ಯದ ಶೇ.50 ರಷ್ಟು ಹಾಸಿಗೆಗಳನ್ನು ಕೊರೊನಾ ರೋಗಿಗಳಿಗೆ ಮೀಸಲಿಡಬೇಕು ಎಂದು ತಿಳಿಸಲಾಗಿತ್ತು. ಖಾಸಗಿ ಆಸ್ಪತ್ರೆಗಳಲ್ಲಿ ರೋಗಿಗಳ ಚಿಕಿತ್ಸಾ ವೆಚ್ಚ ಮರುಪಾವತಿಯನ್ನು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ನೋಡಿಕೊಳ್ಳುತ್ತದೆ. ಜತೆಗೆ ಆಸ್ಪತ್ರೆಗಳಲ್ಲಿ ವಿಧಿಸುವ ದರ ಪಟ್ಟಿ ಬಗ್ಗೆಯೂ ಉಲ್ಲೇಖಿಸಲಾಗಿದೆ.

ಇದೇ ವೇಳೆ, ಕಳೆದ 1 ತಿಂಗಳಲ್ಲಿ 0-14 ವರ್ಷದ 4,172 ಮಕ್ಕಳಿಗೆ ಕೊರೊನಾ ಸೋಂಕು ದೃಢಪಟ್ಟಿರುವ ಮಾಹಿತಿ ಲಭ್ಯವಾಗಿದೆ.

### ಯಾರಿಗೆ ಎಷ್ಟು ದರ?

**ಸರ್ಕಾರದ ವತಿಯಿಂದ ಕಳುಹಿಸುವ ರೋಗಿಗಳಿಗೆ**

| | |
|---|---|
| 5200 ರೂ. ಜನರಲ್ ವಾರ್ಡ್ | 7000 ರೂ. ಆಕ್ಸಿಜನ್ ಹಾಸಿಗೆ |
| 8500 ರೂ. ವೆಂಟಿಲೇಟರ್ ರಹಿತ ಐಸಿಯು ಹಾಸಿಗೆ | 10000 ರೂ. ವೆಂಟಿಲೇಟರ್ ಸಹಿತ ಹಾಸಿಗೆ |

ಸರ್ಕಾರದ ವತಿಯಿಂದ ದಾಖಲಾಗುವ ರೋಗಿಗಳ ವೆಚ್ಚವನ್ನು ಸರ್ಕಾರವೇ ಭರಿಸಲಿದೆ.

**ನೇರವಾಗಿ ಖಾಸಗಿ ಆಸ್ಪತ್ರೆಗೆ ದಾಖಲಾಗಿರುವ ರೋಗಿಗಳಿಗೆ**

| | |
|---|---|
| 10,000 ರೂ. ಜನರಲ್ ವಾರ್ಡ್ | 12,000 ರೂ. ಆಕ್ಸಿಜನ್ ಹಾಸಿಗೆ |
| 15000 ರೂ. ವೆಂಟಿಲೇಟರ್ ರಹಿತ ಐಸಿಯು ಹಾಸಿಗೆ | 25,000 ರೂ. ವೆಂಟಿಲೇಟರ್ ಸಹಿತ ಹಾಸಿಗೆ |

ಯುವಜನರು, ಮಧ್ಯವಯಸ್ಕರ ಸಾವು-ಆತಂಕ: ದೇಶದಲ್ಲಿ ಲಕ್ಷಕ್ಕೂ ಹೆಚ್ಚು ಸೋಂಕಿತರು ಒಂದೇ ದಿನ ಪತ್ತೆಯಾಗಿದ್ದಾರೆ. ರಾಜ್ಯದಲ್ಲಿ ಸೋಮವಾರ ಒಂದೇ ದಿನ 32 ಸಾವಾಗಿದೆ. ಮಧ್ಯವಯಸ್ಕರು, 25 ವರ್ಷದ ಯುವಜನರು ಸಾವಿಗೀಡಾಗಿರುವುದು ಆತಂಕ ಉಂಟುಮಾಡಿದೆ. ಈ ಹಿನ್ನೆಲೆಯಲ್ಲಿ ಸಾವಿನ ಆಡಿಟ್ ಮಾಡಬೇಕೆಂದು ತಾಂತ್ರಿಕ ಸಲಹಾ ಸಮಿತಿಗೆ ಸೂಚಿಸಲಾಗಿದೆ. ಎರಡನೇ ಅಲೆ ಬೇಗ ಹರಡುತ್ತಿದೆ. ಇದರ ತೀವ್ರತೆ ಕಡಿಮೆ ಇದೆಯೋ, ಹೆಚ್ಚಿದೆಯೋ ಎಂದು ಹೇಳಲು ಈಗಲೇ ಸಾಧ್ಯವಿಲ್ಲ. ಆದರೆ ಅದನ್ನು ಎದುರಿಸಲು ಬೇಕಾದ ಸಿದ್ಧತೆಗಳನ್ನು ಮಾಡಲಾಗಿದೆ ಎಂದು ಸುಧಾಕರ್ ತಿಳಿಸಿದರು.